# All India Radio: Bangalore
# National Bulletin In Kannada
# 09.02.2026 07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.02.2026 07.35 a.m.**

**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ಸೀಶೆಲ್ಸ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. ಪರೀಕ್ಷಾ ಪೆ ಚರ್ಚೆ: ಎರಡನೇ ಸಂಚಿಕೆಯಲ್ಲಿಂದು ವಿದ್ಯಾರ್ಥಿಗಳೊಂದಿಗೆ ಪ್ರಧಾನಿ ಸಂವಾದ
3. ಛತ್ತೀಸ್‌ಗಢದ ಬಸ್ತರ್ ಪಾಂಡಮ್ ಉತ್ಸವದ ಸಮಾರೋಪ ಸಮಾರಂಭದಲ್ಲಿಂದು ಕೇಂದ್ರ ಸಚಿವ ಅಮಿತ್ ಶಾ ಭಾಗಿ
4. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಐರ್ಲ್ಯಾಂಡ್ ವಿರುದ್ಧ ಶ್ರೀಲಂಕಾ ತಂಡಕ್ಕೆ ೨೦ ರನ್‌ಗಳ ಜಯ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯಲ್ಲಿ ಸೀಶೆಲ್ಸ್ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮಿನಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಇಬ್ಬರೂ ನಾಯಕರು ಪರಸ್ಪರ ಆಸಕ್ತಿಯ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಸೀಶೆಲ್ಸ್ ಅಧ್ಯಕ್ಷರು ಇಂದು ಸಂಜೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ಆರು ದಿನಗಳ ಭಾರತ ಭೇಟಿಯಲ್ಲಿರುವ ಹರ್ಮಿನಿ ಅವರು ನಿನ್ನೆ ನವದೆಹಲಿಗೆ ಆಗಮಿಸಿದರು. ಅವರನ್ನು ವಿಮಾನ ನಿಲ್ದಾಣದಲ್ಲಿ ಕೇಂದ್ರ ಸಚಿವೆ ಅನುಪ್ರಿಯಾ ಪಟೇಲ್ ಸ್ವಾಗತಿಸಿದರು. ಸೀಶೆಲ್ಸ್ ಹಿಂದೂ ಮಹಾಸಾಗರ ಪ್ರದೇಶದಲ್ಲಿ ಭಾರತಕ್ಕೆ ಪ್ರಮುಖ ನೆರೆಯ ರಾಷ್ಟ್ರವಾಗಿದೆ ಹಾಗೂ ಭಾರತದ ವಿಷನ್ ಮಹಾಸಾಗರ್ ಮತ್ತು ಜಾಗತಿಕ ದಕ್ಷಿಣಕ್ಕೆ ಬದ್ಧತೆಯಲ್ಲಿ ವಿಶೇಷ ಸ್ಥಾನವನ್ನು ಹೊಂದಿದೆ. ಸೀಶೆಲ್ಸ್ ಅಧ್ಯಕ್ಷರ ಭೇಟಿಯು ಭಾರತ ಮತ್ತು ಸೀಶೆಲ್ಸ್ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೫೦ನೇ ವಾರ್ಷಿಕೋತ್ಸವದೊಂದಿಗೆ ಹೊಂದಿಕೆಯಾಗುತ್ತದೆ. ನವದೆಹಲಿಗೆ ಬರುವ ಮೊದಲು, ಸೀಶೆಲ್ಸ್

ಅಧ್ಯಕ್ಷರು ಚೆನ್ನೈ ಮತ್ತು ಮುಂಬೈಗೆ ಭೇಟಿ ನೀಡಿದ್ದರು. ಸೆಶೆಲ್ಸ್ ಅಧ್ಯಕ್ಷರ ಭೇಟಿಯು ಎರಡೂ ದೇಶಗಳ ನಡುವಿನ ವ್ಯಾಪಕ ಸಹಕಾರ ಮತ್ತು ಬಲವಾದ ಜನರಿಂದ ಜನರ ನಡುವಿನ ಬಾಂಧವ್ಯಕ್ಕೆ ಮತ್ತಷ್ಟು ವೇಗ ನೀಡುತ್ತದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು, ಕೌಲಾಲಂಪುರದಲ್ಲಿ ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗೆ ನಿನ್ನೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಭದ್ರತೆ, ವಿಪತ್ತು ನಿರ್ವಹಣೆ, ಸೆಮಿಕಂಡಕ್ಟರ್ ಅಭಿವೃದ್ಧಿ, ಆಡಿಯೋ-ವಿಶುವಲ್ ಸಹ-ನಿರ್ಮಾಣ, ಭ್ರಷ್ಟಾಚಾರ ನಿಗ್ರಹ, ಸೇರಿದಂತೆ ಹಲವಾರು ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಭಯೋತ್ಪಾದನೆ ನಿಗ್ರಹ, ಗುಪ್ತಚರ ಮಾಹಿತಿ ಹಂಚಿಕೆ, ಕಡಲ ಭದ್ರತೆ ಮತ್ತು ರಕ್ಷಣೆಯಲ್ಲಿ ಉಭಯ ದೇಶಗಳ ನಡುವಿನ ಸಹಕಾರವು ವಿಸ್ತರಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಇಂಧನ, ಮೂಲಸೌಕರ್ಯ, ಉತ್ಪಾದನೆ ಮತ್ತು ಡಿಜಿಟಲ್ ಆರ್ಥಿಕತೆಯಲ್ಲಿ ಎರಡೂ ದೇಶಗಳ ಸಹಕಾರ ಬೆಳೆಯುತ್ತಿದೆ. ಕೃತಕ ಬುದ್ಧಿಮತ್ತೆ, ಅರೆವಾಹಕಗಳು, ಆರೋಗ್ಯ ಮತ್ತು ಆಹಾರ ಭದ್ರತೆಯಲ್ಲೂ ಸಹಯೋಗ ಆಳವಾಗುತ್ತಿದೆ. ಭಯೋತ್ಪಾದನೆಯ ವಿರುದ್ಧ ಭಾರತದ ನಿಲುವು ಸ್ಪಷ್ಟವಾಗಿದೆ. ಭಯೋತ್ಪಾದನೆಯ ಬಗ್ಗೆ ಯಾವುದೇ ದ್ವಿಮುಖ ಮಾನದಂಡಗಳು ಮತ್ತು ರಾಜಿ ಸಾಧ್ಯವಿಲ್ಲ ಎಂದು ಅವರು ಪ್ರತಿಪಾದಿಸಿದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ ಪರೀಕ್ಷಾ ಪೆ ಚರ್ಚೆ ೨೦೨೬ರ ಎರಡನೇ ಸಂಚಿಕೆಯಲ್ಲಿ ದೇಶಾದ್ಯಂತ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಈ ಕಾರ್ಯಕ್ರಮವು ಬೆಳಗ್ಗೆ ೧೦ ಗಂಟೆಗೆ ಪ್ರಸಾರವಾಗಲಿದೆ. ಪರೀಕ್ಷೆಗಳು ಹತ್ತಿರವಾಗುತ್ತಿರುವುದರಿಂದ, ಪರೀಕ್ಷಾ ಒತ್ತಡ, ತಯಾರಿ ತಂತ್ರಗಳು, ಸಮಯ ನಿರ್ವಹಣೆ ಮತ್ತು ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆಗಳನ್ನು ಎದುರಿಸಲು ಸಹಾಯ ಮಾಡುವ ಬಗ್ಗೆ ಈ ಸಂವಾದ ಕೇಂದ್ರೀಕರಿಸುತ್ತದೆ. ಪರೀಕ್ಷಾ ಪೆ ಚರ್ಚೆಯಲ್ಲಿ ತಮಿಳುನಾಡಿನ ಕೊಯಮತ್ತೂರು, ಛತ್ತೀಸ್‌ಗಢದ ರಾಯ್‌ಪುರ, ಗುಜರಾತ್‌ನ ದೇವ್ ಮೋಗ್ರಾ ಮತ್ತು ಅಸ್ಸಾಂನ ಗುವಾಹಟಿಯ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.

ಪರೀಕ್ಷೆಗಳನ್ನು ನಿರ್ವಹಿಸುವುದು, ಆತ್ಮವಿಶ್ವಾಸವನ್ನು ಬೆಳೆಸುವುದು, ಸಕಾರಾತ್ಮಕವಾಗಿ ಉಳಿಯುವುದು ಹಾಗೂ ಆತಂಕ ಮತ್ತು ಒತ್ತಡದಂತಹ ಸಾಮಾನ್ಯ ಸವಾಲುಗಳನ್ನು ನಿವಾರಿಸುವ

ಬಗ್ಗೆ ಪ್ರಾಯೋಗಿಕ ಸಲಹೆಯನ್ನು ಪ್ರಧಾನಿ ಹಂಚಿಕೊಳ್ಳುತ್ತಾರೆ. ಈ ತಿಂಗಳ ೭ ರಂದು ಪ್ರಸಾರವಾದ ಮೊದಲ ಸಂಚಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮಕ್ಕಳ ಪ್ರಶ್ನೆಗಳಿಗೆ ಉತ್ತರಿಸುವ ಮೂಲಕ ಆತ್ಮೀಯವಾಗಿ ಸಂವಾದ ನಡೆಸಿದರು.

<><><><>

ಛತ್ತೀಸ್‌ಗಢ ಪ್ರವಾಸದಲ್ಲಿರುವ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಇಂದು ಜಗದಲ್‌ಪುರದಲ್ಲಿ ನಡೆಯಲಿರುವ ಬಸ್ತರ್ ಪಾಂಡಮ್ ಉತ್ಸವದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಈ ಉತ್ಸವವನ್ನು ಕಳೆದ ಶುಕ್ರವಾರ ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದ್ದರು. ಛತ್ತೀಸ್‌ಗಢದ ಎಡಪಂಥೀಯ ಉಗ್ರವಾದ ಪೀಡಿತ ಪ್ರದೇಶಗಳಿಗೆ ನಿನ್ನೆ ಭೇಟಿ ನೀಡಿದ್ದ ಸಚಿವ ಅಮಿತ್ ಶಾ, ಭದ್ರತಾ ವ್ಯವಸ್ಥೆಗಳು ಮತ್ತು ಅಭಿವೃದ್ಧಿ ಯೋಜನೆಗಳನ್ನು ಪರಿಶೀಲಿಸಿದ್ದರು. ಬಳಿಕ ರಾಯ್‌ಪುರದಲ್ಲಿ ಎರಡು ಉನ್ನತ ಮಟ್ಟದ ಸಭೆಗಳ ಅಧ್ಯಕ್ಷತೆ ವಹಿಸಿದ್ದರು. ಈ ಸಭೆಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು, ಭದ್ರತಾ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ನಂತರ "ಛತ್ತೀಸ್‌ಗಢ @೨೫: ಶಿಫ್ಟಿಂಗ್ ದಿ ಲೆನ್ಸ್" ರಾಷ್ಟ್ರೀಯ ಸಮಾವೇಶದಲ್ಲಿ ಸಚಿವ ಅಮಿತ್ ಶಾ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು.

<><><><>

ಪಶ್ಚಿಮ ಬಂಗಾಳದ ಸಿಯುರಿ ಸೇತುವೆ, ಕುಮಾರ್‌ಪುರ ಸೇತುವೆಯನ್ನು ವರ್ಚುವಲ್ ಮೂಲಕ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಉದ್ಘಾಟಿಸಿದರು. ಇದೇ ವೇಳೆ ನೂತನ ಅಸನ್ಸೋಲ್-ಬೊಕಾರೊ ರೈಲು ಸೇವೆಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಗಳು ಪಶ್ಚಿಮ ಬಂಗಾಳದಲ್ಲಿ ರೈಲು ಮೂಲಸೌಕರ್ಯ ಬಲಪಡಿಸುವ, ಸುರಕ್ಷತೆಯನ್ನು ಹೆಚ್ಚಿಸುವ ಮತ್ತು ಪ್ರಾದೇಶಿಕ ಸಂಪರ್ಕವನ್ನು ಸುಧಾರಿಸುವತ್ತ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದ್ದಾರೆ.

<><><><>

ಜಪಾನ್‌ನ ಸಂಸತ್ ಚುನಾವಣೆಯಲ್ಲಿ ಜಯಗಳಿಸಿದ ಜಪಾನ್ ಪ್ರಧಾನಿ ಸನೇ ತಕೈಚಿ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಉಭಯ ದೇಶಗಳ ನಡುವಿನ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಸಹಭಾಗಿತ್ವವು ಜಾಗತಿಕ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದ್ದಾರೆ.

ತಕೈಚಿ ಅವರ ಸಮರ್ಥ ನಾಯಕತ್ವವು ಭಾರತ-ಜಪಾನ್ ಸ್ನೇಹವನ್ನು ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><><><>

ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ೨೦೨೬ ಪಂದ್ಯಾವಳಿಯ ಬಿ ಗುಂಪಿನ ಆರನೇ ಪಂದ್ಯದಲ್ಲಿ ಐರ್ಲ್ಯಾಂಡ್ ವಿರುದ್ಧ ಶ್ರೀಲಂಕಾ ೨೦ ರನ್‌ಗಳಿಂದ ಜಯ ಗಳಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ನಿಗದಿತ ೨೦ ಓವರ್‌ಗಳಿಗೆ ೬ ವಿಕೆಟ್ ನಷ್ಟಕ್ಕೆ ೧೬೩ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಐರ್ಲ್ಯಾಂಡ್, ೧೯.೫ ಓವರ್‌ಗಳಿಗೆ ೧೪೩ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು.

<><><><>

ಬೆಂಗಳೂರಿನಲ್ಲಿ ನಿನ್ನೆ ನಡೆದ ಟೆನಿಸ್ ಪಂದ್ಯದಲ್ಲಿ, ಭಾರತ, ನೆದರ್‌ಲ್ಯಾಂಡ್ಸ್ ವಿರುದ್ಧ ೩-೨ ಅಂತರದ ಐತಿಹಾಸಿಕ ಗೆಲುವಿನೊಂದಿಗೆ ಡೇವಿಸ್ ಕಪ್ ಅರ್ಹತಾ ಸುತ್ತಿನ ಎರಡನೇ ಹಂತಕ್ಕೆ ಪ್ರವೇಶಿಸಿತು. ದಕ್ಷಿಣೇಶ್ವರ ಸುರೇಶ್ ವೀರೋಚಿತ ಪ್ರದರ್ಶನ ನೀಡಿ, ತಮ್ಮ ಎರಡೂ ಸಿಂಗಲ್ಸ್ ಪಂದ್ಯಗಳನ್ನು ಗೆದ್ದು, ಯೂಕಿ ಭಾಂಬ್ರಿ ಜೊತೆಗೂಡಿ ಡಬಲ್ಸ್ ಗೆದ್ದರು. ನಿರ್ಣಾಯಕ ಪಂದ್ಯದಲ್ಲಿ, ಸುರೇಶ್, ಗೈ ಡಿ ಔಡೆನ್ ಅವರನ್ನು ೬-೪, ೭-೬ ಅಂತರದಿಂದ ಸೋಲಿಸಿ ಗೆಲುವು ಸಾಧಿಸಿದರು. ಇದಕ್ಕೂ ಮೊದಲು, ಸುರೇಶ್ ಮತ್ತು ಭಾಂಬ್ರಿ ಮ್ಯಾರಥಾನ್ ಡಬಲ್ಸ್ ಪಂದ್ಯವನ್ನು ೭-೬, ೩-೬, ೭-೬ ಅಂತರದಲ್ಲಿ ಗೆದ್ದ ನಂತರ ಭಾರತ ೨-೧ ಮುನ್ನಡೆ ಸಾಧಿಸಿತ್ತು. ಆದಾಗ್ಯೂ, ಸುಮಿತ್ ನಾಗಲ್ ತಮ್ಮ ಎರಡೂ ಸಿಂಗಲ್ಸ್ ಪಂದ್ಯಗಳನ್ನು ಸೋತರು.

<><><><>

ಚೀನಾದ ಟಿಯಾಂಜಿನ್‌ನಲ್ಲಿ ನಡೆದ ಏಷ್ಯನ್ ಒಳಾಂಗಣ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ಐದು ಪದಕಗಳನ್ನು ಗೆದ್ದು, ಪದಕ ಪಟ್ಟಿಯಲ್ಲಿ ಆರನೇ ಸ್ಥಾನ ಪಡೆದಿದೆ. ಪುರುಷರ ಹೆಪ್ಟಾಥ್ಲಾನ್ ಸ್ಪರ್ಧೆಯನ್ನು ಗೆಲ್ಲುವ ಮೂಲಕ ತೇಜಸ್ವಿನ್ ಶಂಕರ್ ಅತ್ಯುತ್ತಮ ಪ್ರದರ್ಶನ ನೀಡಿ, ಚಿನ್ನದ ಪದಕ ಗೆದ್ದರು. ಈ ಸ್ಪರ್ಧೆಯಲ್ಲಿ ಅವರು ೫ ಸಾವಿರದ ೯೯೩ ಅಂಕಗಳನ್ನು ಗಳಿಸುವ ಮೂಲಕ ಹೊಸ ದಾಖಲೆಯನ್ನು ಸ್ಥಾಪಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>